1 ಶಾಸಿ ಮ (120)
4ಗ
27/1

**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಐವನ್ ಡಿ'ಸೋಜಾ, ಅವರು ನಿಯಮ 72ರ ಮೇರೆಗೆ ರಾಜ್ಯದಲ್ಲಿ ಪಂಚ ಗ್ಯಾರಂಟಿ ಜಾರಿಗೆ ತಂದು ಎರಡುವರೆ ವರ್ಷದ ಅವಧಿಯಲ್ಲಿ ಜನರ ಜೀವನ ಮೇಲೆ ಉಂಟಾಗಿರುವ ಪ್ರಗತಿ ಮತ್ತು ಆರ್ಥಿಕ ವ್ಯವಸ್ಥೆಯ ತಲಾ ಆದಾಯ ಏರಿಕೆ ಬಗ್ಗೆ ಮತ್ತು ಪಂಚ ಗ್ಯಾರಂಟಿಗಳಿಂದ ಉಂಟಾಗಿರುವ ಸಮಸ್ಯೆಗಳ ಬಗ್ಗೆ ಮಾನ್ಯ ಸದಸ್ಯರು ಸಲ್ಲಿಸಿರುವ ವಿಷಯದ ಕುರಿತು**

ನಮ್ಮ ಸರ್ಕಾರವು ಜಾರಿಗೆ ತಂದಿರುವ ಐದು ಗ್ಯಾರಂಟಿ ಯೋಜನೆಗಳ ಮುಖ್ಯ ಉದ್ದೇಶವು ಬಡತನ ನಿವಾರಣೆ, ಮಹಿಳಾ ಸಬಲೀಕರಣ, ಉದ್ಯೋಗ ಸೃಷ್ಟಿ ಮತ್ತು ಆಹಾರ ಭದ್ರತೆ ಒದಗಿಸುವುದಾಗಿರುತ್ತದೆ. ಈ ಮೂಲಕ ಬೆಲೆ ಏರಿಕೆಯಿಂದ ತತ್ತರಿಸುತ್ತಿರುವ ಜನಸಾಮಾನ್ಯರಲ್ಲಿ ಹಣದ ಹರಿವನ್ನು ಹೆಚ್ಚಿಸುವುದು ಮತ್ತು ಆರ್ಥಿಕವಾಗಿ ಸಶಕ್ತರನ್ನಾಗಿ ಮಾಡುವುದಾಗಿದೆ. ಮಹಿಳೆಯರಿಗೆ ಗೃಹಲಕ್ಷ್ಮಿ ಯೋಜನೆಯಡಿ, ಪ್ರತಿ ತಿಂಗಳು ರೂ.2,000 ನಗದು ಮತ್ತು ಶಕ್ತಿ ಯೋಜನೆಯಡಿ ಉಚಿತ ಬಸ್ ಸೇವೆ ನೀಡಲಾಗುತ್ತಿದೆ. ಗೃಹಜ್ಯೋತಿ ಯೋಜನೆಯಡಿ ಎಲ್ಲಾ ಕುಟುಂಬಗಳಿಗೂ ಉಚಿತ ವಿದ್ಯುತ್ ಒದಗಿಸಲಾಗುತ್ತಿದೆ. ಅನ್ನ ಭಾಗ್ಯ ಯೋಜನೆಯಿಂದ ಜನಸಾಮಾನ್ಯರಿಗೆ ಆಹಾರ ಭದ್ರತೆ ಒದಗಿಸಲಾಗುತ್ತಿದ್ದು, ಯುವನಿಧಿ ಯೋಜನೆಯಲ್ಲಿ ಯುವಜನರಿಗೆ ಆರ್ಥಿಕ ನೆರವನ್ನು ನೀಡಲಾಗುತ್ತಿದೆ. ಈ ಎಲ್ಲಾ ಗ್ಯಾರಂಟಿಗಳಿಂದ ರಾಜ್ಯದ ಸುಮಾರು 1.30 ಕೋಟಿ ಕುಟುಂಬಗಳಿಗೆ ವಾರ್ಷಿಕವಾಗಿ ಸರಾಸರಿ 48,000 ದಿಂದ 60,000 ರೂ.ಗಳಷ್ಟು ಹೆಚ್ಚುವರಿ ಆದಾಯ ನೇರವಾಗಿ ದೊರೆಯುವ ವ್ಯವಸ್ಥೆಯನ್ನು ಸರ್ಕಾರ ಮಾಡಿದೆ.

ಗ್ಯಾರಂಟಿ ಯೋಜನೆಗಳು ಸಾರ್ವತ್ರಿಕ ಮೂಲ ಆದಾಯ (Universal Basic Income) ವನ್ನು ಒದಗಿಸುವ ಉದ್ದೇಶ ಹೊಂದಿದ್ದು, ಇದರಿಂದ ಜನರ ಬಳಿ ಹಣದ ಹರಿವು ಹೆಚ್ಚಾಗಲಿದೆ. ಇದು ಜನರಲ್ಲಿ ಖರೀದಿಸುವ ಸಾಮರ್ಥ್ಯವನ್ನು ಹೆಚ್ಚಿಸಲಿದ್ದು, ರಾಜ್ಯದಲ್ಲಿ ಆರ್ಥಿಕ ಚಟುವಟಿಕೆಗಳು ಹೆಚ್ಚಾಗಲಿದೆ ಮತ್ತು ಇದರಿಂದ ರಾಜ್ಯದಲ್ಲಿ ಖಾಸಗಿ ಬಂಡವಾಳ ಹೂಡಿಕೆಯು ಹೆಚ್ಚಾಗಲಿದೆ ಹಾಗೂ ಉತ್ಪಾದಕತೆಯು ಹೆಚ್ಚಲಿದೆ. ರಾಜ್ಯದ ಆರ್ಥಿಕ ಬೆಳವಣಿಗೆಯ ಹೆಚ್ಚಳದಿಂದ ತಲಾದಾಯವು ಹೆಚ್ಚಾಗಲಿದೆ.

ರಾಜ್ಯದ ತಲಾದಾಯವು 2015-16 ರಲ್ಲಿ 1,48,108 ರೂ.ಗಳಿಂದ 2025-26ರಲ್ಲಿ 4,33,326 ರೂ.ಗಳಿಗೆ ಹೆಚ್ಚಳವಾಗಿದೆ. ಕಳೆದ 11 ವರ್ಷದಲ್ಲಿ ರಾಜ್ಯದ ತಲಾದಾಯವು 2.9 ಪಟ್ಟು ಹೆಚ್ಚಳವಾಗಿದೆ. ದೇಶದ ಒಟ್ಟಾರೆ ಆರ್ಥಿಕ ಬೆಳವಣಿಗೆಯಲ್ಲಿ ರಾಜ್ಯದ ಕೊಡುಗೆ ಶೇ. 8.5ರಷ್ಟಿದ್ದು, ಇತರೆ ರಾಜ್ಯಗಳಿಗೆ ಹೋಲಿಸಿದರೆ ನಾಲ್ಕನೇ ಸ್ಥಾನದಲ್ಲಿದೆ. ಅಲ್ಲದೆ, ದೇಶದ ಪ್ರಮುಖ ತೆರಿಗೆ ಸ್ವೀಕೃತಿಯಾದ ಜಿ.ಎಸ್.ಟಿ ತೆರಿಗೆ ಸಂಗ್ರಹಣೆಯ್ಲಲಿ ನಮ್ಮ ರಾಜ್ಯದಿಂದ ಹೆಚ್ಚು ತೆರಿಗೆ ಸಂಗ್ರಹಣೆಯಾಗುತ್ತಿದ್ದು, ದೇಶದಲ್ಲಿಯೇ ಹೆಚ್ಚು ತೆರಿಗೆ ಸಂಗ್ರಹಿಸುವ ಎರಡನೇ ರಾಜ್ಯವಾಗಿದೆ.

ನಮ್ಮ ಸರ್ಕಾರವು ಅಧಿಕಾರಕ್ಕೆ ಬಂದಾಗಿನಿಂದ ಗ್ಯಾರಂಟಿ ಯೋಜನೆಗಳಿಗೆ ಅಗತ್ಯ ಅನುದಾನ ಒದಗಿಸುವ ಮೂಲಕ ಐದು ಗ್ಯಾರಂಟಿ ಯೋಜನೆಗಳನ್ನು ಯಶಸ್ವಿಯಾಗಿ ಜಾರಿಗೆ ತಂದಿರುತ್ತದೆ. ಈ 2023-24ರಿಂದ 15ನೇ ಮಾರ್ಚ್ 2026ರವರೆಗೂ ಸುಮಾರು 1,24,558 ಕೋಟಿ ರೂ.ಗಳನ್ನು ಗ್ಯಾರಂಟಿ ಯೋಜನೆಗಳಿಗೆ ಬಿಡುಗಡೆ ಮಾಡಲಾಗಿದೆ. ಗ್ಯಾರಂಟಿ ಯೋಜನೆಗಳಿಂದ ಜನಸಮಾನ್ಯರಲ್ಲಿ ಮತ್ತು ರಾಜ್ಯದ ಆರ್ಥಿಕತೆಯಲ್ಲಿ ಉಂಟಾದ ಪರಿಣಾಮವನ್ನು ಮನಗಂಡು ನಮ್ಮ ಯೋಜನೆಗಳ ಮಾದರಿಯಲ್ಲೇ ಇತರ ರಾಜ್ಯಗಳಲ್ಲೂ ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡಲಾಗಿರುತ್ತದೆ. ಗ್ಯಾರಂಟಿ ಯೋಜನೆಗಳಿಂದ ಜನಸಾಮಾನ್ಯರಿಗೆ ಅನುಕೂಲವಾಗುತ್ತಿದೆ ಎಂಬುದನ್ನು ಇದು ಸ್ಪಷ್ಟಪಡಿಸುತ್ತದೆ.

ಒಟ್ಟಾರೆಯಾಗಿ ನಮ್ಮ ಸರ್ಕಾರ ಜಾರಿಗೆ ತಂದಿರುವ ಗ್ಯಾರಂಟಿ ಯೋಜನೆಗಳು ಜನರ ಜೀವನ ಮಟ್ಟ ಸುಧಾರಿಸುವುದರೊಂದಿಗೆ ಅವರಲ್ಲಿ ಹಣ ಹರಿವನ್ನು ಹೆಚ್ಚಿಸಲು ಸಹಕಾರಿಯಾಗಿದೆ. ಇದರಿಂದಾಗಿ ರಾಜ್ಯದ ತಲಾದಾಯವು ಹೆಚ್ಚಾಗಿದ್ದು, ಜನ ಸಾಮಾನ್ಯರನ್ನು ಆರ್ಥಿಕವಾಗಿ ಸಬಲರನ್ನಾಗಿ ಮಾಡುವಲ್ಲಿ ಗ್ಯಾರಂಟಿ ಯೋಜನೆಗಳು ಯಶಸ್ವಿಯಾಗಿದೆ.

**ಆಇ/32/ಡಿಎಸ್-ಬಿಆರ್/2026**

(ಸಿದ್ದರಾಮಯ್ಯ)
ಮುಖ್ಯಮಂತ್ರಿ